# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರವರ ಕಛೇರಿ, ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು, ಬೆಂಗಳೂರು-560 002

ಸಂಖ್ಯೆ: ಬಿ12(ಸಿ1)/ಸಿಜಿ/ಪಿಆರ್/ 53 /2023-24 ದಿನಾಂಕ: 22.11.23
Eoffice No.43179

## ನೇಮಕಾತಿ ಆದೇಶ

ವಿಷಯ: ದಿವಂಗತ ಶ್ರೀ ಪರಮೇಶ್.ಕೆ, ನಾಲ್ಕನೇ ದರ್ಜೆ ನೌಕರರು ರವರ ಪತ್ನಿಯಾದ ಶ್ರೀಮತಿ ರೂಪ.ಎಸ್.ವಿ ರವರನ್ನು ಅನುಕಂಪದ ಆಧಾರದ ಮೇಲೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಡಿಪಿಎಆರ್ 100 ಎಸ್‌ಸಿಎ 95, ದಿ: 12-09-1996.



2) ಸದರಿ ಅರ್ಜಿದಾರರ ಮನವಿ ಪತ್ರದ ದಿನಾಂಕ: 15-03-2023
3) ಪೊಲೀಸ್ ಇನ್ಸ್ ಪೆಕ್ಟರ್, ನಗರ ವಿಶೇಷ ಶಾಖೆ, ಆಡಳಿತ, ಪೊಲೀಸ್ ಕಮೀಷನರ್ ರವರ ಪರವಾಗಿ, ಬೆಂಗಳೂರು ನಗರ ರವರ ದೃಢೀಕರಣ ಪತ್ರ ದಿ: 05-07-2023.
4) ಸಹಾಯಕ ಕಂದಾಯ ಅಧಿಕಾರಿ (ಪೀಣ್ಯ ಕೈಗಾರಿಕಾ ಪ್ರದೇಶ ಉಪ ವಿಭಾಗ ) ರವರ ಸ್ಥಳ ಮಹಜರ್ ವರದಿ ದಿ: 27-06-2023
5) ಸಹಾಯಕ ಆಯುಕ್ತರು (ಕಂದಾಯ) ರವರ ಸ್ಥಳ ಮಹಜರ್ ವರದಿ ದಿ: 27-07-2023
6) ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿ: 31-08-2023 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
7) ಸಹಾಯಕ ನಿರ್ದೇಶಕರು (ಪರೀಕ್ಷೆ), ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರ ಪತ್ರ ದಿನಾಂಕ:12-10-2023.

--------

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅನುಕಂಪದ ಆಧಾರದ ನೇಮಕಾತಿ ಕೋರಿ ಸಲ್ಲಿಸಲಾದ ಮನವಿ ಮತ್ತು ದಾಖಲಾತಿಗಳನ್ನು ಪರಿಶೀಲಿಸಿ, ದಿವಂಗತ ಶ್ರೀ ಪರಮೇಶ್.ಕೆ, ನಾಲ್ಕನೇ ದರ್ಜೆ ನೌಕರರು, ಸಹಾಯಕ ಸಹಾಯಕ ಆಯುಕ್ತರು (ಜಾಹಿರಾತು) ರವರ ಕಛೇರಿಯಲ್ಲಿ ವೇತನ ಪಡೆದು ಓಒಡಿ ಆಧಾರದ ಮೇಲೆ ವಿಶೇಷ ಆಯುಕ್ತರು (ಕಂದಾಯ) ರವರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದವರು ಸೇವೆಯಲ್ಲಿರುವಾಗಲೇ ಮೃತರಾಗಿದ್ದು, ಸದರಿಯವರ ಪತ್ನಿಯಾದ ಶ್ರೀಮತಿ ರೂಪ.ಎಸ್.ವಿ ರವರು ದ್ವಿತೀಯ ಪಿ.ಯು.ಸಿ ವಿದ್ಯಾರ್ಹತೆ ಹೊಂದಿರುವುದರಿಂದ ಗ್ರೂಫ್ 'ಸಿ' ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಹಾಯಕ ಆಯುಕ್ತರು (ಜಾಹೀರಾತು) ರವರು ಶಿಫಾರಸ್ಸು ಮಾಡಲಾಗಿರುತ್ತದೆ.

ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:31-08-2023 ರಂದು ನಡೆದ ಅನುಕಂಪದ ಆಧಾರದ ಮೇಲೆ ನೇಮಕಾತಿ ಅಂತಿಮ ಪರಿಶೀಲನಾ ಸಮಿತಿ ಶ್ರೀಮತಿ ರೂಪ.ಎಸ್.ವಿ ರವರನ್ನು ಗ್ರೂಫ್ 'ಸಿ' ಹುದ್ದೆಯಾದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಮಿತಿಯು ತೀರ್ಮಾನಿಸಲಾಗಿರುತ್ತದೆ. ಸದರಿ ಸಮಿತಿಯ ತೀರ್ಮಾನದ ನಡವಳಿಯನ್ನು ನೇಮಕಾತಿ ಪ್ರಾಧಿಕಾರಿಯಾದ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಅನುಮೋದಿಸಿರುತ್ತಾರೆ.

ಶ್ರೀಮತಿ ರೂಪ.ಎಸ್.ವಿ ಕೋಂ ದಿವಂಗತ ಶ್ರೀ ಪರಮೇಶ್.ಕೆ ರವರ ವಿವರಗಳು ಈ ಕೆಳಕಂಡಂತೆ ಇರುತ್ತವೆ.

| | | |
|---|---|---|
| 1. | ಹೆಸರು | ಶ್ರೀಮತಿ ರೂಪ.ಎಸ್.ವಿ |
| 2. | ಜನ್ಮ ದಿನಾಂಕ | 10-06-1991 (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿರುವಂತೆ, ರಿ.ನಂ:-20070650806) |
| 3. | ವಿಳಾಸ | ನಂ.84, 4ನೇ ಕ್ರಾಸ್, ಗಂಗಾಧರೇಶ್ವರ ಬಡಾವಣೆ, ಗಣಪತಿ ನಗರ್, ಲಗ್ಗೆರೆ, ಪೀಣ್ಯ ಸ್ಮಾಲ್ ಇಂಡಸ್ಟ್ರಿಯಲ್, ಬೆಂಗಳೂರು 560058 |
| 4. | ಪ್ರವರ್ಗ | ಪ್ರವರ್ಗ IIIಎ (ಒಕ್ಕಲಿಗ) (ದಿ: 13-03-2023 ರಂದು ತಹಶೀಲ್ದಾರ್, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ಜಿಲ್ಲೆ ರವರು ವಿತರಿಸಿರುವ ಜಾತಿ ಪ್ರಮಾಣ ಪತ್ರ) |

ಉಲ್ಲೇಖ-(1)ರ ಸರ್ಕಾರಿ ಆದೇಶದ ಅನ್ವಯ ಹಾಗೂ ಉಲ್ಲೇಖ-(2) ರಿಂದ (4)ರ ವರೆಗಿನ ದಾಖಲಾತಿಗಳು ಮತ್ತು ವರದಿಗಳನ್ನಾಧರಿಸಿ ಉಲ್ಲೇಖ-(5) ಮತ್ತು (6)ರ ಸಭೆ ನಡವಳಿಗಳ ತೀರ್ಮಾನದಂತೆ, ದಿವಂಗತ ಶ್ರೀ ಪರಮೇಶ್.ಕೆ, ನಾಲ್ಕನೇ ದರ್ಜೆ ನೌಕರರು ರವರ ಪತ್ನಿಯಾದ ಶ್ರೀಮತಿ ರೂಪ.ಎಸ್.ವಿ ರವರನ್ನು ಅನುಕಂಪದ ಆಧಾರದ ಮೇಲೆ ವೇತನ ಶ್ರೇಣಿ ರೂ.21400-42000ರಲ್ಲಿ ಗ್ರೂಪ್ "ಸಿ" ದರ್ಜೆಯಲ್ಲಿ ದ್ವಿತೀಯ ದರ್ಜೆ ಸಹಾಯಕರು ಹುದ್ದೆಗೆ ಈ ಕೆಳಕಂಡ ಷರತ್ತಿಗಳಿಗೊಳಪಡಿಸಿ ನೇಮಕಾತಿ ಮಾಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಖಾಲಿ ಇರುವ ಸಹಾಯಕ ಕಂದಾಯ ಅಧಿಕಾರಿ (ಮಹಾಲಕ್ಷ್ಮಿಲೇಔಟ್) ಇಲ್ಲಿ ಕಾರ್ಯನಿರ್ವಹಿಸಲು ಆದೇಶಿಸಲಾಗಿದೆ.

ಪು.ತಿ.ನೋ...

**ಷರತ್ತುಗಳು**

1) ಶ್ರೀಮತಿ ರೂಪ.ಎಸ್.ವಿ ಕೋಂ ದಿವಂಗತ ಶ್ರೀ ಪರಮೇಶ್.ಕೆ, ಇವರು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಈ ಪತ್ರ ತಲುಪಿದ 7 ದಿವಸಗಳೊಳಗಾಗಿ, ದೇಹದಾರ್ಢ್ಯತೆ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಪ್ರಮಾಣ ಪತ್ರ ಮತ್ತು ಇತರೇ ಮೂಲ ದಾಖಲಾತಿಗಳೊಂದಿಗೆ ಸಹಾಯಕ ಕಂದಾಯ ಅಧಿಕಾರಿ (ಮಹಾಲಕ್ಷ್ಮಿಲೇಔಟ್) ರವರ ಬಳಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಕರ್ತವ್ಯಕ್ಕೆ ಹಾಜರಾದ ಕೂಡಲೇ ಚರಾಸ್ತಿಗಳ ಮತ್ತು ಸ್ಥಿರಾಸ್ತಿಗಳ ವಿವರಣೆಯನ್ನು ತೋರಿಸುವ ಪಟ್ಟಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

2) ಈ ನೇಮಕಾತಿಯು 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಯಂತೆ 2 ವರ್ಷಗಳ ಪರೀಕ್ಷಾರ್ಥ ಅವಧಿಗೆ ಒಳಪಟ್ಟಿರುತ್ತದೆ. ಈ ಅವಧಿಯಲ್ಲಿ ತೃಪ್ತಿಕರ ಸೇವೆ ಸಲ್ಲಿಸಿ, ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್ / ಲೋಯರ್, ರೆವಿನ್ಯೂ ಲೋಯರ್, ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್ ಪರೀಕ್ಷೆಗಳಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಪಾಸು ಮಾಡುವುದು ಕಡ್ಡಾಯಗೊಳಿಸಲಾಗಿದೆ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣ / ವಿನಾಯಿತಿ ಪಡೆದು, ಪರೀಕ್ಷಾರ್ಥ ಸೇವಾ ಅವಧಿಯನ್ನು ಘೋಷಿಸಿಕೊಳ್ಳುವುದು.

3) ಸರ್ಕಾರದ ಅಥವಾ ಸರ್ಕಾರದಿಂದ ಅಂಗೀಕೃತ ಹೊಂದಿದ ಸಂಸ್ಥೆಯಿಂದ ಒಂದು ವರ್ಷದ ಅವಧಿಯೊಳಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಎಸ್ ಸಿಆರ್ 2008, ದಿನಾಂಕ: 18-12-2012ರ ಆದೇಶದಂತೆ ಕಂಪ್ಯೂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಪ್ರಮಾಣ ಪತ್ರವನ್ನು ಸಲ್ಲಿಸುವುದು.

4) ಸದರಿಯವರು ಷರತ್ತು 2 ಮತ್ತು 3ನ್ನು ಪರೀಕ್ಷಾರ್ಥ ಅವಧಿ ಪೂರೈಸದಿದ್ದಲ್ಲಿ 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಗಳ ನಿಯಮ 5(1)(ಬಿ) ರನ್ವಯ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಲಾಗುವುದೆಂದು ತಿಳಿಯುವುದು.

5) ಈ ನೇಮಕಾತಿಯನ್ನು ಪಡೆಯಲು ಅಭ್ಯರ್ಥಿಯು ಯಾವುದಾದರೂ ನಕಲು ಇಲ್ಲವೇ ಫೋರ್ಜರಿ ದಾಖಲಾತಿಗಳನ್ನು ಅಥವಾ ಸುಳ್ಳು ಮಾಹಿತಿಯನ್ನು ಸಲ್ಲಿಸಿರುವುದು ದೃಢಪಟ್ಟಲ್ಲಿ 2020ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಅಧಿಕಾರಿ ಮತ್ತು ನೌಕರರುಗಳ ಸಾಮಾನ್ಯ ವೃಂದ ಮತ್ತು ನೇಮಕಾತಿ) ನಿಯಮಗಳು, 1977ರ ಸಾಮಾನ್ಯ ನೇಮಕಾತಿ ನಿಯಮಾವಳಿ ನಿಯಮ (20)ರ ರೀತ್ಯಾ ನೇಮಕಾತಿ ಹೊಂದುವ ಸಲುವಾಗಿ ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ನಗರ ಪಾಲಿಕೆಗೆ ವಂಚಿಸಿರುತ್ತಾರೆಂದು ಭಾವಿಸಿ, 1957ರ ಕರ್ನಾಟಕ ನಾಗರಿಕ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಾವಳಿಯ ನಿಯಮ 11ರ ರೀತಿ ನೇಮಕಾತಿ ಆದೇಶವನ್ನು ರದ್ದುಪಡಿಸಲಾಗುವುದು ಹಾಗೂ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದೆಂದು ತಿಳಿಯುವುದು.

6) ಪಿಂಚಣಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31-03-2006 ರಂತೆ, ಎನ್.ಪಿ.ಎಸ್ ಗೆ ಅರ್ಹರಿರುತ್ತೀರಿ.

7) ಸದರಿಯವರು ಅಗತ್ಯ ದಾಖಲೆಗಳನ್ನು ಕೂಡಲೇ ಒದಗಿಸಿ ನೂತನ ಪಿಂಚಣಿ ಯೋಜನೆಯಲ್ಲಿ ನೊಂದಾಯಿಸಲು ಸೂಚಿಸಿದೆ ಹಾಗೂ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು PRAN ಸಂಖ್ಯೆ ಸೃಜಿಸಲು ಹಾಗೂ ಕಟಾವಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
27/10/2023

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು(ಯೋಜನೆ/ಆಡಳಿತ/ಹಣಕಾಸು/ ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ವಲಯ / ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಸಹಾಯಕ ಕಂದಾಯ ಅಧಿಕಾರಿ (ಮಹಾಲಕ್ಷ್ಮಿಲೇಔಟ್) ರವರ ಕಛೇರಿಗೆ ಅಭ್ಯರ್ಥಿಯ ಭಾವಚಿತ್ರದೊಂದಿಗೆ ಮುಂದಿನ ಕ್ರಮಕ್ಕೆ ಕಳುಹಿಸಿದೆ.
: ಸಹಾಯಕ ಆಯುಕ್ತರು (ಜಾಹೀರಾತು) ರವರ ಕಛೇರಿಗೆ ಮೃತ ನೌಕರರ ಸೇವಾಪುಸ್ತಕವನ್ನು ಮುಂದಿನ ಕ್ರಮಕ್ಕೆ ಕಳುಹಿಸಿದೆ.
: ಸಹಾಯಕ ಆಯುಕ್ತರು, ನೇಮಕಾತಿ ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ/ಮು.ಲೆ.ಪ/ಉ.ನಿ. (ಹಣಕಾಸು- ಪಶ್ಚಿಮ ) ರವರಿಗೆ ಕಳುಹಿಸಿದೆ.
: ನಿರ್ದೇಶಕರು (ಮಾಹಿತಿ ಮತ್ತು ತಂತ್ರಜ್ಞಾನ) ಹಾಗೂ ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್ನಲ್ಲಿ ಅಳವಡಿಸಲು ಸೂಚಿಸಿದೆ.
: ಅಭ್ಯರ್ಥಿಗೆ / ಕಛೇರಿ ಕಡತಕ್ಕೆ.

Roopa.S.V.
20/11/23
Ph:- 8971580518